# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರದೀಪ್ ಶೆಟ್ಟರ್ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **866** |
| ಉತ್ತರಿಸಬೇಕಾದ ದಿನಾಂಕ | : | 24.07.2024 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹುಬ್ಬಳ್ಳಿ ಮತ್ತು ಧಾರವಾಡ ಅವಳಿ ನಗರದ ವ್ಯಾಪ್ತಿಯಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಜನ ವಸತಿ ಯೋಜನೆಯನ್ನು ಪ್ರಾರಂಭಿಸಲಾಗಿದೆ; | ಹುಬ್ಬಳ್ಳಿ ಮತ್ತು ಧಾರವಾಡ ನಗರದ ವ್ಯಾಪ್ತಿಯಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**ನಗರ ವಸತಿ ಪ್ರದೇಶ:**<br><br>1. ವಾಜಪೇಯಿ ನಗರ ವಸತಿ ಯೋಜನೆ<br>2. ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ನಗರ)<br>3. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) |
| ಆ) | ಈ ಜನ ವಸತಿ ಯೋಜನೆಯ ಕಾರ್ಯಕ್ರಮಗಳು ಯಾವ ಹಂತದಲ್ಲಿವೆ; | 2023-24 ಹಾಗೂ 2024- 25 ನೇ ಸಾಲುಗಳಿಗೆ ಹೊಸ ಮನೆಗಳ ಗುರಿಯನ್ನು ಆಯವ್ಯಯದಲ್ಲಿ ಘೋಷಣೆ ಮಾಡಿರುವುದಿಲ್ಲ.<br><br>ಆದರೆ, 2021-22ನೇ ಸಾಲಿಗೆ ನೀಡಲಾಗಿರುವ ಮನೆಗಳ ಪ್ರಸ್ತುತ ಪ್ರಗತಿಯಲ್ಲಿರುವ ಮನೆಗಳ ವಿವರ ಈ ಕೆಳಕಂಡಂತಿದೆ. |

| ಯೋಜನೆ | ಅನುಮೋದನೆಗೊಂಡ ಮನೆಗಳು | ಪೂರ್ಣಗೊಂಡ ಮನೆಗಳು | ಪ್ರಗತಿಯಲ್ಲಿರುವ ಮನೆಗಳು | ಪ್ರಾರಂಭವಾಗದ ಮನೆಗಳು |
|---|---|---|---|---|
| ಡಾ|| ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ (ನ) | 91 | 36 | 22 | 33 |
| ವಾಜಪೇಯಿ ನಗರ ವಸತಿ ಯೋಜನೆ | 225 | 109 | 38 | 78 |
| ಪ್ರಧಾನ ಮಂತ್ರಿ ಆವಾಸ್ ಯೋಜನೆ AHP | 2239 | 317 | 657 | 1265 |
| **ಒಟ್ಟು** | **2555** | **462** | **717** | **1376** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಜನ ವಸತಿ ಯೋಜನೆಯ ಕಾರ್ಯಗಳು ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರಕ್ಕೆ ಕೈಗೊಂಡ ಕ್ರಮಗಳೇನು? | ವಸತಿ ರಹಿತ ಬಡ ಕುಟುಂಬಗಳಿಗೆ ವಸತಿ ಸೌಕರ್ಯ ಒದಗಿಸಲು ಸರ್ಕಾರದಿಂದ ಮನೆ ನಿರ್ಮಾಣಕ್ಕೆ ಸಹಾಯಧನ ಮೊತ್ತವನ್ನು ಮಾತ್ರ ನೀಡಲಾಗುತ್ತಿದೆ. ಸರ್ಕಾರದಿಂದ ನೀಡಲಾಗುವ ಸಹಾಯಧನದೊಂದಿಗೆ ಫಲಾನುಭವಿಗಳು ತಮ್ಮ ಇಚ್ಛೆಗೆ ಅನುಗುಣವಾಗಿ ವಂತಿಕೆ ಮೊತ್ತವನ್ನು ಸೇರಿಸಿ ಮನೆ ನಿರ್ಮಾಣ ಮಾಡಿಕೊಳ್ಳಲು ಅವಕಾಶವಿರುತ್ತದೆ. ವಸತಿ ಯೋಜನೆಯಡಿ ಫಲಾನುಭವಿಗಳೇ ತಮ್ಮ ಮನೆಯನ್ನು ಸ್ವತಃ ತಾವೇ ನಿರ್ಮಿಸಿಕೊಳ್ಳಬೇಕಿರುತ್ತದೆ. ಫಲಾನುಭವಿಗಳು ನಿರ್ಮಿಸುವ ಮನೆಯ ಭೌತಿಕ ಪ್ರಗತಿಗೆ ಅನುಗುಣವಾಗಿ ನಿಗಮದಿಂದ ಸಹಾಯಧನವನ್ನು ಬಿಡುಗಡೆಗೊಳಿಸಲಾಗುತ್ತಿದೆ.<br><br>ಪ್ರಗತಿಯಲ್ಲಿರುವ ಮನೆಗಳನ್ನು ನಿಗದಿಪಡಿಸಿದ ಕಾಲಮಿತಿಯೊಳಗಾಗಿ ಮನೆಗಳನ್ನು ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿಗಳು, ಆಯುಕ್ತರು/ಪೌರಾಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಪ್ರಗತಿ ಪರಿಶೀಲನಾ ಸಭೆಗಳ ಮೂಲಕ ಕ್ರಮವಹಿಸಲಾಗುತ್ತಿದೆ.<br><br>• ಪ್ರಧಾನ ಮಂತ್ರಿ ಆವಾಸ್ ನಗರ ವಸತಿ ಯೋಜನೆಯಡಿ ಫಲಾನುಭವಿಗಳು ತಮ್ಮ ಪಾಲಿನ ವಂತಿಕೆ ಪಾವತಿಸುವಲ್ಲಿ ವಿಳಂಭ ಮಾಡುತ್ತಿರುವುದು.<br>• ಫಲಾನುಭವಿಗಳಿಗೆ ಗೃಹಸಾಲ ನೀಡಲು ಬ್ಯಾಂಕ್ ಗಳು ಆಸಕ್ತಿ ತೋರದೇ ಇರುವುದು.<br>• ಫಲಾನುಭವಿಗಳೇ ಟೆಂಡರ್ ಪ್ರೀಮಿಯಂ/ ಜಿ.ಎಸ್.ಟಿ / ಇತ್ಯಾದಿ ಮೊತ್ತವನ್ನು |

| | | |
|---|---|---|
| | | ಭರಿಸುವಲ್ಲಿ ಆರ್ಥಿಕ ಹೊರೆಯಾಗುತ್ತಿರುವುದು.<br>• ಮೂಲಭೂತ ಸೌಕರ್ಯಗಳನ್ನು ಒದಗಿಸಲು ನಗರ ಸ್ಥಳೀಯ ಸಂಸ್ಥೆಗಳು ಅನುದಾನ ಒದಗಿಸಬೇಕಿದ್ದು, ಆದರೆ ಸಕಾಲದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ಅನುದಾನ ಒದಗಿಸಲು ಸಾಧ್ಯವಾಗುತ್ತಿಲ್ಲ. |

ಸಂಖ್ಯೆ: ವಇ 237 ಹೆಚ್‌ಎಎಂ 2024

B. [signature]

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು